**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

**ಸಿಸಿ ನಂ.107/2024**

**ಫಿರ್ಯಾದುದಾರರುಃ** ಶ್ರೀ.ಅಶೋಕ, ಬಿನ್ ಕೆ.ಎಸ್.ರಾಜಪ್ಪ,
43 ವರ್ಷ, ವಾಸಃ ಕಲ್ಲಹಳ್ಳಿ ಗ್ರಾಮ,
ಹನಗೋಡು ಹೋಬಳಿ, ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಶ್ರೀ.ನಯಾಜ್ ಪಾಷ, ಬಿನ್ ಅತಾವುಲ್ಲಾ,
35 ವರ್ಷ, ವಾಸಃ ಮುಸಾಫರ್ ಖಾನೆ,
ಹಳೇ ಬ್ರಿಡ್ಜ್, ಹುಣಸೂರು ಟೌನ್,
ಮೈಸೂರು ಜಿಲ್ಲೆ.
ಕೆಲಸದ ಸ್ಥಳಃ ಶಾ ಬೊಟಿಕ್, ಬೌಸ್ ಕ್ಯಾಂಡ್ ವರ್ಕ್,
ಕರೀಗೌಡ ಕಟ್ಟಡ, 1ನೇ ಹಂತ, ಕ್ಲಬ್ ರಸ್ತೆ,
ಹುಣಸೂರು ಟೌನ್, ಮೈಸೂರು ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಅಶೋಕರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿದಿದೆ |
| ಪ್ರಶ್ನೆ 2: | ಪಿ.ಡಬ್ಲ್ಯೂ1 ಅಶೋಕರವರು ತಮ್ಮ ಸಾಕ್ಷ್ಯದಲ್ಲಿ, ನೀವು ಮತ್ತು ಅವರು ಹಲವಾರು ವರ್ಷಗಳಿಂದ ಒಬ್ಬರಿಗೊಬ್ಬರು ಪರಿಚಯಸ್ಥರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 3: | ಪಿ.ಡಬ್ಲ್ಯೂ1 ರವರು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಪರಿಚಯದ ಆಧಾರದ ಮೇಲೆ ನೀವು ಜುಲೈ – 2023ರಂದು ಅವರಿಂದ ರೂ.2,00,000/– ಗಳನ್ನು ನಿಮ್ಮ ಕಾನೂನು ಬದ್ಧ |

| | |
|---|---|
| | ಅವಶ್ಯಕತೆಗಾಗಿ ಅಂದರೆ ವ್ಯಾಪಾರಕ್ಕಾಗಿ ಮೂರು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 4: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲದ ಮರುಪಾವತಿಗಾಗಿ ನೀವು 17.10.2023 ರ ದಿನಾಂಕ ನಮೂದಿಸಿದ ಕೊಟಕ್ ಮಹೀಂದ್ರಾ ಬ್ಯಾಂಕ್, ಬಿಡದಿ ಶಾಖೆಯ ಚೆಕ್ ಸಂಖ್ಯೆ 000005 ಅನ್ನು ರೂ.2,00,000/-ಗಳಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಇರುವ ಇಸಾಫ್ ಸ್ಮಾಲ್ಲಾ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ" ಎಂಬ ಕಾರಣಕ್ಕಾಗಿ ಸದರಿ ಚೆಕ್ ಅಮಾನ್ಯಗೊಂಡು ದಿನಾಂಕಃ 16.12.2023 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ದಿನಾಂಕ 28.12.2023 ರಂದು ಅವರು ನಿಮಗೆ ತಮ್ಮ ವಕೀಲರ ಮೂಲಕ ನೊಂದಾಯಿತ ಅಂಚೆಯ ಮೂಲಕ ಮತ್ತು ಆರ್ಡಿನರಿ ಅಂಚೆಯ ಮೂಲಕ ನೋಟೀಸನ್ನು ನೀಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |

| | |
|---|---|
| ಉತ್ತರ: | ಸುಳ್ಳು |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆರ್ಡಿನರಿ ಅಂಚೆಯ ಮೂಲಕ ಕಳುಹಿಸಿದ ನೋಟೀಸನ್ನು ನೀವು ಸ್ವೀಕರಿಸಿದ್ದು, ನೋಂದಾಯಿತ ಅಂಚೆಯ ಮೂಲಕ ಕಳುಹಿಸಿದ ನೋಟೀಸು "Not claimed and hence returned to sender" ಎಂಬ ಷರಾದೊಂದಿಗೆ ದಿನಾಂಕಃ 04.01.2024ರಂದು ವಾಪಾಸಾಗಿದ್ದು, ಈ ಬಗ್ಗೆ ನಿಮಗೆ ಮಾಹಿತಿ ಇದ್ದರೂ ಸಹ ನೀವು ಉದ್ದೇಶಪೂರ್ವಕವಾಗಿ ಫಿರ್ಯಾದುದಾರರಿಗೆ ನೀಡಬೇಕಾದ ಚೆಕ್ಕಿನ ಹಣವನ್ನು ಮರುಪಾವತಿಸಿಲ್ಲ ಹಾಗು ನೋಟೀಸಿಗೆ ಉತ್ತರವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಈವರೆಗೂ ಸಾಲದ ಹಣವನ್ನು ಮರುಪಾವತಿಸದೆ ಇರುವುದರಿಂದ ನೆಗೋಶಿಯೆಬಲ್ ಇನ್ಸ್ಟ್ರುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 9: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ, ಅಂಚೆ ಲಕೋಟೆ ಮತ್ತು ದೂರನ್ನು ನಿಪಿ–1 ರಿಂದ ನಿಪಿ–6 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 10: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇದೆ |
| ಪ್ರಶ್ನೆ 11: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇದೆ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 17.03.2026.

ANITHA Digitally signed by ANITHA Date: 2026.03.17 17:53:07 +0530

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ